## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಟಿ ಗೋಪಾಲಕೃಷ್ಣ, ಕಾರ್ಯದರ್ಶಿ, ಗಂಗೋನಹಳ್ಳಿ ಗ್ರಾಮ ಪಂಚಾಯತಿ, ತುಮಕೂರು ತಾಲ್ಲೂಕು ಮತ್ತು ಜಿಲ್ಲೆ (ಪ್ರಸ್ತುತ ಒಳಕಲ್ಲು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ) ರವರು ಕರ್ತವ್ಯ ಲೋಪ ಎಸಗಿರುವ ಬಗ್ಗೆ.

ಓದಲಾಗಿದೆ: 1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ/151-152/2016/ಸನಿಕಾಸ-1, ದಿನಾಂಕ: 27-10-2017.

2. ಮಾನ್ಯ ಉಪಲೋಕಾಯಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಅ.ಸ.ಪ.ಸಂ: ಕಂಪ್ಲೇಂಟ್/ಉಪಲೋಕ್/ಬಿಡಿ/151-152/2016/ಸನಿಕಾಸ-1, ದಿನಾಂಕ: 17-08-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:17.08.2017ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಕೆ.ಜಿ.ನರಸಿಂಹಮೂರ್ತಿ ಬಿನ್ ಗಂಗನರಸಯ್ಯ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ ಮತ್ತು ತಾಲ್ಲೂಕು ಹೆಬ್ಬೂರು ಹೋಬಳಿ ಗಂಗೋನಹಳ್ಳಿ ಗ್ರಾಮ ಪಂಚಾಯತ್ 1) ಶ್ರೀ ಓಂಕಾರಮೂರ್ತಿ, ವಾಟರ್‌ಮನ್ ಮತ್ತು 2) ಶ್ರೀ ಟಿ. ಗೋಪಾಲಕೃಷ್ಣ, ಕಾರ್ಯದರ್ಶಿ, ಗಂಗೋನಹಳ್ಳಿ ಗ್ರಾಮ ಪಂಚಾಯತಿ (ಪ್ರಸ್ತುತ ಒಳಕಲ್ಲು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ) (ಇನ್ನು ಮುಂದೆ "1 ಮತ್ತು 2ನೇ ಎದುರುದಾರರು" ಎಂದು ಕ್ರಮವಾಗಿ ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

1ನೇ ಎದುರುದಾರರು 2009ನೇ ಸಾಲಿನಲ್ಲಿ ಎಂಜಿಎನ್‌ಆರ್‌ಇಜಿಎ ಯೋಜನೆ ಅಡಿ ಅಕ್ರಮವಾಗಿ ಜಾಬ್ ಕಾರ್ಡ ನಂ.ಕೆಎನ್ 25-009-003-010/310 ಸಿಕೆಜಿಬಿ ಸಿರಿವರ ಖಾತೆ ನಂ.13135049539 ರೂ:11,080/-ನ್ನು ಪಡೆದು ಅದೇ ರೀತಿ, ಸದರಿ ಮೊತ್ತವನ್ನು ಎಂಜಿಎನ್‌ಆರ್‌ಇಜಿಎ ನಿಧಿಗೆ ಜಮಾ ಮಾಡಿದ್ದಾರೆ. ಅಲ್ಲದೇ, 40 ದಿನಗಳ ಕೆಲಸದ ಹೆಸರನ್ನು ನಮೂದಿಸದೇ ರೂ.6,199.88/-ಗಳನ್ನು ತಮ್ಮ ಖಾತೆಗೆ ಜಮಾ ಮಾಡಿಕೊಂಡಿರುವುದಾಗಿ ದೂರುದಾರರು ಹೇಳಿದ್ದಾರೆ.

**ದೂರಿನ ಬಗ್ಗೆ ಎದುರುದಾರರುಗಳಿಂದ ಆಕ್ಷೇಪಣೆಯನ್ನು ಕೇಳಲಾಗಿ, 1ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ-**

ತಾವು ಅರೆಕಾಲಿಕ ನೌಕರರಾದ ಕಾರಣ ಜಾಬ್ ಕಾರ್ಡ ಮಾಡಿಸಿಕೊಳ್ಳಬಾರದೆಂಬ ಬಗ್ಗೆ ಗೊತ್ತಿಲ್ಲ ಹಾಗೂ ಎಂಜಿಎನ್‌ಆರ್‌ಇಜಿಎ ಯೋಜನೆ ಅಡಿ ತಾವು ಮತ್ತು ತಮ್ಮ ಕುಟುಂಬದವರು ಸೇರಿ ತಮ್ಮ ಜಮೀನು ಮತ್ತು ಶೌಚಾಲಯದಲ್ಲಿ ಕಾಮಗಾರಿ ಮಾಡಿಕೊಂಡಿರುತ್ತೇವೆ ಹೊರತು ಯಾವುದೇ ಸಾಮಾಜಿಕ ಕೆಲಸಗಳಲ್ಲಿ ಭಾಗವಹಿಸಿಲ್ಲ. ಅಲ್ಲದೇ, ಅಭಿವೃದ್ಧಿ ಅಧಿಕಾರಿಗಳು ತಮ್ಮ ಜಾಬ್ ಕಾರ್ಡ ರದ್ದುಪಡಿಸಿದ್ದಾರೆ ಹಾಗೂ ತಮ್ಮ ಖಾತೆಗೆ ಜಮಾ ಆದ ಹಣವನ್ನು ವಾಪಾಸ್ ಪಡೆದಿದ್ದಾರೆ. 40 ದಿನಗಳ ಕಾಮಗಾರಿ ಹೆಸರು ಗಂಗೋನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ರೈತರ ಜಮೀನಿನಲ್ಲಿ ಗೀಡ ನೆಡುವುದಾಗಿದೆಯೆಂದು ತಪ್ಪಾಗಿದೆ ಹಾಗೂ ತಮ್ಮ ಜಮೀನಿನಲ್ಲಿ ಗಿಡ ನೆಟ್ಟಿದೆಯೇ ಹೊರತು, ಕಾನೂನುಬಾಹಿರವಾಗಿ ಕೆಲಸ ಮಾಡಿ ಹಣ ಪಡೆದಿಲ್ಲವೆಂದು ಹೇಳಿದ್ದಾರೆ.

**ಎರಡನೇ (2ನೇ) ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ-**

ಸದರಿ ಕಾಮಗಾರಿಗಳನ್ನು ಅರಣ್ಯ ಇಲಾಖಾ ವತಿಯಿಂದ ನಿರ್ವಹಿಸಿದ್ದು, ದಿ:22.08.2015ರ ಒಂಬುಡ್ಸಮನ್

ವರದಿಯಂತೆ ಶ್ರೀ ಓಂಕಾರಮೂರ್ತಿ ರವರಿಗೆ ನೀಡಿದ ಜಾಬ್ ಕಾರ್ಡನ್ನು ರದ್ದುಪಡಿಸಲಾಗಿದೆ ಮತ್ತ 40 ದಿನಗಳ ಕೂಲಿ ವೇತನವನ್ನು ಸರ್ಕಾರಕ್ಕೆ ಜಮಾ ಮಾಡಿದೆ. ಗ್ರಾಮ ಪಂಚಾಯತ್‌ನ ಇತರೆ ಕಾರ್ಯಗಳ ಒತ್ತಡದ ನಡುವೆ ಗಣಕಯಂತ್ರ ನಿರ್ವಾಹಕರು ಉದ್ಯೋಗ ಚೀಟಿ ಮಾಡಿದೆಯೆಂದು ಹೇಳಿದ್ದಾರೆ.

**ಎದುರುದಾರರ ಆಕ್ಷೇಪಣೆಗಳಿಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ-**

ಎದುರುದಾರರಿಗೆ ತಾವು ಸರ್ಕಾರಿ ನೌಕರರಾಗಿ ಜಾಬ್ ಕಾರ್ಡ ಪಡೆದುಕೊಳ್ಳಲು ಬರುವುದಿಲ್ಲವೆಂಬ ವಿಚಾರ ಗೊತ್ತಿದ್ದರೂ ಸಹ ಸುಳ್ಳು ಮಾಹಿತಿ ನೀಡಿ, ಜಾಬ್ ಕಾರ್ಡ ಪಡೆದು, 40 ದಿನಗಳ ಕೆಲಸ ಮಾಡಿರುವ ಬಗ್ಗೆ ಸುಳ್ಳು ಮಾಹಿತಿ ನೀಡಿ, ಹಣ ಪಡೆದು ಅಕ್ರಮ ಎಸಗಿರುವುದಾಗಿ ಹೇಳಿದ್ದಾರೆ.

**ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ-**

ನೀರು ವಿತರಕರಾದ 1ನೇ ಎದುರುದಾರರು ಸದರಿ ಗ್ರಾಮ ಪಂಚಾಯತ್‌ನ ಖಾಯಂ ನೌಕರರಾಗಿದ್ದು, 2ನೇ ಎದುರುದಾರರು ಸದರಿಯವರಿಗೆ ಎಂಜಿಎನ್‌ಆರ್‌ಇಜಿಎ ಯೋಜನೆ ಅಡಿ ಉದ್ಯೋಗ ಚೀಟಿ ನಂ. ಕೆಎನ್ 25-009-003-010/310 ಸಿಕೆಜಿಬಿ ಅನ್ನು ನೀಡಿರುವುದು ಕಂಡು ಬಂದಿದೆ. ಅದೇ ರೀತಿ, ಸದರಿಯವರಿಂದ ಕೆಲವೊಂದು ಕಾಮಗಾರಿಗಳನ್ನು ಸದರಿ ಜಾಬ್ ಕಾರ್ಡ್ ಮೂಲಕ ಮಾಡಿ, ರೂ.6,199.88/-ನ್ನು ಸದರಿಯವರ ಖಾತೆಗೆ ಜಮಾ ಮಾಡಿರುವುದು ಕಂಡು ಬಂದಿದೆ. ಸದರಿ ವಿಚಾರವಾಗಿ ತುಮಕೂರು ಜಿಲ್ಲಾ ಪಂಚಾಯತ್ ಒಂಬುಡ್ಸಮನ್ ರವರ ಕಛೇರಿಗೆ ದೂರುದಾರರು ಮನವಿ ಸಲ್ಲಿಸಿದ ಮೇರೆಗೆ, ದೂರು ಸಂಖ್ಯೆ:ಒಂಕಾ.ಜಿಪಂತು/ದೂ49/2014-15 ರಂತೆ ವಿಚಾರಣೆ ನಡೆದು 1ನೇ ಎದುರುದಾರರಿಗೆ ನೀಡಲಾದ ಉದ್ಯೋಗ ಚೀಟಿಯನ್ನು ರದ್ದುಪಡಿಸುವ ಬಗ್ಗೆ ಮತ್ತು 1ನೇ ಎದುರುದಾರರಿಂದ ರೂ.11,086/- ಮತ್ತು 2ನೇ ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ತುಮಕೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ವರದಿ ಸಲ್ಲಿಸಿರುವುದು ಕಂಡು ಬಂದಿದೆ. ಆದರೆ, ಸದರಿ ವರದಿಯ ಆಧಾರದ ಮೇಲೆ ಕ್ರಮ ಕೈಗೊಂಡ ಬಗ್ಗೆ ಯಾವುದೇ ದಾಖಲೆಗಳಿಲ್ಲ. 1ನೇ ಎದುರುದಾರರು ಖಾಯಂ ನೌಕರರಾಗಿದ್ದು, ತಾವು ನೌಕರಿಯಲ್ಲಿರುವ ಸಂದರ್ಭದಲ್ಲಿ ಎಂಜಿಎನ್‌ಆರ್‌ಇಜಿಎ ಯೋಜನೆ ಅಡಿ ಉದ್ಯೋಗ ಚೀಟಿ ಪಡೆಯುವುದು ತಪ್ಪು ಎಂಬ ವಿಚಾರ ಗೊತ್ತಿದ್ದರೂ ಸಹ ಉದ್ಯೋಗ ಚೀಟಿ ಪಡೆದಿದ್ದಾರೆ. ಅದೇ ರೀತಿ, 2ನೇ ಎದುರುದಾರರು 1ನೇ ಎದುರುದಾರರಿಗೆ ಉದ್ಯೋಗ ಚೀಟಿ ಮತ್ತು ಎಂಜಿಎನ್‌ಆರ್‌ಇಜಿಎ ಯೋಜನೆ ಅಡಿ ಉದ್ಯೋಗ ನೀಡುವುದು ತಪ್ಪು ಎಂಬ ವಿಚಾರ ಗೊತ್ತಿದ್ದರೂ ಸಹ, ಕೆಲವೊಂದು ಕಾಮಗಾರಿಗಳನ್ನು ನೀಡಿ, ಸರ್ಕಾರದ ಹಣವನ್ನು ಬಿಡುಗಡೆ ಮಾಡಿ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಮತ್ತು ಎದುರುದಾರರುಗಳು ನೀಡಿರುವ ಆಕ್ಷೇಪಣೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರುಗಳು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡುಬರುತ್ತದೆ.

ಈ ಹಿನ್ನೆಲೆಯಲ್ಲಿ 2ನೇ ಎದುರುದಾರರು ಸರ್ಕಾರಿ ನೌಕರರಾಗಿದ್ದು, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1) ರನ್ವಯ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುವುದು ಕಂಡು ಬರುವುದರಿಂದ, ಶ್ರೀ ಟಿ. ಗೋಪಾಲಕೃಷ್ಣ, ಕಾರ್ಯದರ್ಶಿ, ಗಂಗೋನಹಳ್ಳಿ ಗ್ರಾಮ ಪಂಚಾಯತಿ (ಪ್ರಸ್ತುತ ಒಳಕಲ್ಲು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ) ವಿರುದ್ಧ ಇಲಾಖಾ ವಿಚಾರಣೆ ನಡೆಸಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14(ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/809/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 08-12-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಟಿ. ಗೋಪಾಲಕೃಷ್ಣ, ಕಾರ್ಯದರ್ಶಿ, ಗಂಗೋನಹಳ್ಳಿ ಗ್ರಾಮ ಪಂಚಾಯತಿ, ತುಮಕೂರು ತಾಲ್ಲೂಕು ಮತ್ತು ಜಿಲ್ಲೆ (ಪ್ರಸ್ತುತ ಒಳಕಲ್ಲು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ) ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಪಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ 1 ರಿಂದ 45 ರವರೆಗಿನ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ತುಮಕೂರು, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ತುಮಕೂರು, ತುಮಕೂರು ಜಿಲ್ಲೆ.
6. ಶ್ರೀ ಟಿ. ಗೋಪಾಲಕೃಷ್ಣ, ಕಾರ್ಯದರ್ಶಿ, ಗಂಗೋನಹಳ್ಳಿ ಗ್ರಾಮ ಪಂಚಾಯತಿ, ತುಮಕೂರು ತಾಲ್ಲೂಕು ಮತ್ತು ಜಿಲ್ಲೆ (ಪ್ರಸ್ತುತ ಒಳಕಲ್ಲು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ).
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.